Akashvani: Bangalore
National Bulletins In Kannada
26.07.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*******

ಮುಖ್ಯಾಂಶಗಳು :

1. ಮಾಲ್ಡೀವ್ಸ್ ಸ್ವಾತಂತ್ರ್ಯೋತ್ಸವದಲ್ಲಿಂದು ಗೌರವ ಅತಿಥಿಯಾಗಿ ಪ್ರಧಾನಿ ನರೇಂದ್ರ ಮೋದಿ ಭಾಗಿ
2. ಪಹಲ್ಗಾಮ್ ದಾಳಿ - ಆಪರೇಷನ್ ಸಿಂದೂರ್ ಕುರಿತು ಚರ್ಚೆಗೆ ಉಭಯ ಸದನಗಳಲ್ಲಿ ೧೬ ಗಂಟೆಗಳ ಸಮಯ ನಿಗದಿ
3. ಇಂದು ಕಾರ್ಗಿಲ್ ವಿಜಯ್ ದಿವಸ್; ಹುತಾತ್ಮ ಯೋಧರ ಸ್ಮರಣೆ
4. ಫಿಡೆ ಮಹಿಳಾ ಚೆಸ್ ವಿಶ್ವಕಪ್; ಫೈನಲ್‌ನಲ್ಲಿಂದು ಭಾರತದ ಕೊನೇರು ಹಂಪಿ - ದಿವ್ಯಾ ದೇಶ್ಮುಖ್ ಮುಖಾಮುಖಿ

**********

ಮಾಲ್ಡೀವ್ಸ್ ರಾಜಧಾನಿ ಮಾಲೆಯಲ್ಲಿ ಇಂದು ನಡೆಯಲಿರುವ ೬೦ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಗೌರವ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಅಧ್ಯಕ್ಷ ಮೊಹಮ್ಮದ್ ಮುಯಿಝು ಅವರ ಆಹ್ವಾನದ ಮೇರೆಗೆ ಪ್ರಧಾನಿ, ಮಾಲ್ಡೀವ್ಸ್‌ಗೆ ಅಧಿಕೃತ ಭೇಟಿ ನೀಡಿದ್ದಾರೆ. ನಿನ್ನೆ, ಅಧ್ಯಕ್ಷ ಮುಯಿಝು ಮತ್ತು ಪ್ರಥಮ ಮಹಿಳೆ ಸಜಿದಾ ಮೊಹಮ್ಮದ್ ಅವರ ಗೌರವಾರ್ಥ ಆಯೋಜಿಸಲಾಗಿದ್ದ ಔತಣಕೂಟದಲ್ಲಿ ಮಾತನಾಡಿದ ಪ್ರಧಾನಿ, ಆಹ್ವಾನಕ್ಕೆ ಕೃತಜ್ಞತೆ ಸಲ್ಲಿಸಿ, ಮಾಲ್ಡೀವ್ಸ್ ಜನರಿಗೆ ಸ್ವಾತಂತ್ರ್ಯ ದಿನಾಚರಣೆಯ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಮಾತನಾಡಿದ ಮಾಲ್ಡೀವ್ಸ್ ಅಧ್ಯಕ್ಷರು, ಭಾರತದ ಪ್ರಧಾನಿಯಾಗಿ ಎರಡನೇ ಅತಿ ಹೆಚ್ಚು ಕಾಲ ಸೇವೆ ಸಲ್ಲಿಸಿದ ನರೇಂದ್ರಮೋದಿಯವರನ್ನು ಅಭಿನಂದಿಸಿದರು. ಮೋದಿಯವರ ನಾಯಕತ್ವವನ್ನು ಶ್ಲಾಘಿಸಿದ ಅವರು, ಭಾರತ ಮತ್ತು ಮಾಲ್ಡೀವ್ಸ್ ನಡುವಿನ ಬಲವಾದ ಸಂಬಂಧಗಳನ್ನು ಪುನರುಚ್ಚರಿಸಿದರು. ದೀರ್ಘಕಾಲದಿಂದ ಮಾಲ್ಡೀವ್ಸ್‌ನ ಅತ್ಯಂತ ವಿಶ್ವಾಸಾರ್ಹ

ಪಾಲುದಾರನಾಗಿ ಭಾರತ, ನಿಂತಿದೆ ಎಂದು ಅವರು ಪ್ರತಿಪಾದಿಸಿದರು.ಮಾಲೆಯಲ್ಲಿ ನಿನ್ನೆ ಭಾರತ ಹಾಗೂ ಮಾಲ್ಡೀವ್ಸ್ ನಡುವೆ ವಿವಿಧ ವಲಯಗಳಲ್ಲಿ ಸಹಕಾರ ಬಲವರ್ಧನೆಯ ಉದ್ದೇಶದ ಆರು ತಿಳಿವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಯಿತು. ಇದರಲ್ಲಿ ಮೀನುಗಾರಿಕೆ, ಹವಾಮಾನ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಯುಪಿಐ ಸೇರಿವೆ. ಇದರ ಜತೆಗೆ ಭಾರತ, ಮಾಲ್ಡೀವ್ಸ್‌ಗೆ ೪ ಸಾವಿರದ ೮೫೦ ಕೋಟಿ ರೂಪಾಯಿಗಳ ಸಾಲದ ನೆರವನ್ನು ನೀಡಿದೆ.

**********

ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂದೂರ್ ಕುರಿತು ಬರುವ ಸೋಮವಾರ ಲೋಕಸಭೆಯಲ್ಲಿ ವಿಶೇಷ ಚರ್ಚೆ ನಡೆಯಲಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅಧ್ಯಕ್ಷತೆಯಲ್ಲಿ ನಡೆದ ವ್ಯವಹಾರ ಸಲಹಾ ಸಮಿತಿ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.ಲೋಕಸಭೆಯಲ್ಲಿ ಚರ್ಚೆಗೆ ೧೬ ಗಂಟೆಗಳ ಕಾಲ ಅವಕಾಶ ನೀಡಲಾಗಿದೆ ಮತ್ತು ರಾಜ್ಯಸಭೆಯು ಮಂಗಳವಾರ ೧೬ ಗಂಟೆಗಳ ಕಾಲ ಇದರ ಬಗ್ಗೆ ಚರ್ಚೆ ನಡೆಸಲಿದೆ.ವಿರೋಧ ಪಕ್ಷಗಳು ಆಪರೇಷನ್ ಸಿಂದೂರ್ ಕುರಿತು ಚರ್ಚೆಗೆ ಒತ್ತಾಯಿಸುತ್ತಿವೆ ಸರ್ಕಾರ ಮೊದಲ ದಿನದಿಂದಲೇ ಅದಕ್ಕೆ ಸಹಮತ ವ್ಯಕ್ತಪಡಿಸಿದೆ ಎಂದು ಕಿರಣ್ ರಿಜಿಜು ಹೇಳಿದರು.ಸಂಸತ್ತಿನ ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಪಕ್ಷಗಳ ನಡುವೆ ಒಮ್ಮತ ಮೂಡಿಬಂದಿದೆ ಎಂದ ಅವರು, ಅಧಿವೇಶನಕ್ಕೆ ಅಡ್ಡಿಪಡಿಸದಂತೆ ವಿರೋಧ ಪಕ್ಷಗಳಿಗೆ ಮನವಿ ಮಾಡಿದರು.

ಧ್ವನಿ - ಕಿರಣ್ ರಿಜಿಜು (೨೬ ಸೆಕೆಂಡ್ಸ್)

ನ್ಯಾಯಮೂರ್ತಿ ಯಶವಂತ್ ವರ್ಮಾ ವಿರುದ್ಧ ಮಹಾಭಿಯೋಗ ನಿರ್ಣಯ ಮಂಡಿಸುವ ವಿಷಯದ ಕುರಿತು, ನ್ಯಾಯಮೂರ್ತಿ ವರ್ಮಾ ಅವರನ್ನು ಪದಚ್ಯುತಿಗೊಳಿಸುವ ವಿಷಯ ಒಮ್ಮತದ ನಿರ್ಧಾರವಾಗಿರಬೇಕು ಎಂದು ಎಲ್ಲಾ ರಾಜಕೀಯ ಪಕ್ಷಗಳು ಒಪ್ಪಿಕೊಂಡಿವೆ ಎಂದು ಸಂಸದೀಯ ವ್ಯವಹಾರಗಳ ಸಚಿವರು ಹೇಳಿದ್ದಾರೆ.

**********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನಿಂದ ಎರಡು ದಿನಗಳ ತಮಿಳುನಾಡು ಪ್ರವಾಸ ಕೈಗೊಳ್ಳಲಿದ್ದಾರೆ. ಬ್ರಿಟನ್ ಮತ್ತು ಮಾಲ್ಡೀವ್ಸ್ ರಾಷ್ಟ್ರಗಳ ಪ್ರವಾಸ ಪೂರ್ಣಗೊಳಿಸಿದ ನಂತರ ಪ್ರಧಾನಿ, ನೇರವಾಗಿ ಟುಟಿಕೋರಿನ್‌ಗೆ ಪ್ರಯಾಣ ಬೆಳಸಲಿದ್ದಾರೆ. ಇಂದು ರಾತ್ರಿ ಟುಟಿಕೋರಿನ್‌ನಲ್ಲಿ ಪ್ರಧಾನಿಯವರು ೪ ಸಾವಿರದ ೮೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ರಾಷ್ಟ್ರಕ್ಕೆ ಸಮರ್ಪಿಸಿ, ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಯೋಜನೆಗಳು, ಪ್ರಾದೇಶಿಕ ಸಂಪರ್ಕವನ್ನು ಗಮನಾರ್ಹವಾಗಿ ವೃದ್ಧಿಸಿ, ಶುದ್ಧ ಇಂಧನ ಮೂಲಸೌಕರ್ಯವನ್ನು ಬಲಪಡಿಸುತ್ತವೆ. ಇವುಗಳಲ್ಲಿ ಟುಟಿಕೋರಿನ್ ವಿಮಾನ ನಿಲ್ದಾಣದಲ್ಲಿ ಹೊಸ ಟರ್ಮಿನಲ್ ಕಟ್ಟಡ, ಸೇಥಿಯಾಥೊಪ್ಪು-ಚೋಳಪುರಂನ ಚತುಷ್ಪಥ, ತೂತುಕುಡಿ ಬಂದರು ರಸ್ತೆಯ ಷಟ್ಪಥ, ೯೦ ಕಿ.ಮೀ. ಮಧುರೈ-ಬೋಡಿನಾಯಕನೂರ್ ರೈಲು ಮಾರ್ಗದ ವಿದ್ಯುದೀಕರಣ, ೨೧ ಕಿ.ಮೀ. ನಾಗರಕೋಯಿಲ್ ಪಟ್ಟಣ-ಕನ್ಯಾಕುಮಾರಿ ವಿಭಾಗದ ದ್ವಿಗುಣಗೊಳಿಸುವಿಕೆ ಸೇರಿವೆ. ಅಲ್ಲದೇ, ಪ್ರಮುಖ ವಿದ್ಯುತ್ ಪ್ರಸರಣ ಯೋಜನೆಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ನಾಳೆ, ತಿರುಚಿರಾಪಳ್ಳಿಯ ಗಂಗೈಕೊಂಡ ಚೋಳಪುರಂ ದೇವಸ್ಥಾನಕ್ಕೆ ಭೇಟಿ ನೀಡಲಿರುವ ಅವರು, ಚೋಳ ಚಕ್ರವರ್ತಿ ರಾಜೇಂದ್ರ ಚೋಳ ಅವರ ಜನ್ಮ ವಾರ್ಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ.

**********

ದೇಶದ ಕಾನೂನು ಜಾರಿ ಸಂಸ್ಥೆಗಳು ಭಯೋತ್ಪಾದನೆ ಮತ್ತು ಕಳ್ಳ ಸಾಗಣೆ ಚಟುವಟಿಕೆಗಳಲ್ಲಿ ತೊಡಗಿ, ಪರಾರಿಯಾಗಿರುವ ವ್ಯಕ್ತಿಗಳನ್ನು ವಾಪಸ್ ಕರೆತರಲು ಸಮರ್ಪಕ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಎರಡು ದಿನಗಳ ರಾಷ್ಟ್ರೀಯ ಭದ್ರತಾ ಕಾರ್ಯತಂತ್ರಗಳ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಹಾಗೂ ರಾಜ್ಯಗಳ ಕಾನೂನುಜಾರಿ ಸಂಸ್ಥೆಗಳ ನಡುವೆ ಅಂತರ್ ಸಂಸ್ಥೆ ಸಹಕಾರವನ್ನು ಬಲಪಡಿಸುವ ಅಗತ್ಯವಿದೆ, ಹಣಕಾಸು ಅವ್ಯವಹಾರಗಳ ಆಧಾರದ ಮೇಲೆ ಭಯೋತ್ಪಾದಕ ಘಟಕಗಳು ಹಾಗೂ ಭಯೋತ್ಪಾದಕರ ಹಣಕಾಸು ಮೂಲಗಳನ್ನು ಭೇದಿಸುವಂತೆ ಅವರು ಭದ್ರತಾ ಸಂಸ್ಥೆಗಳಿಗೆ ತಿಳಿಸಿದರು. ಭಯೋತ್ಪಾದಕ ಜಾಲಗಳ ಗೌಪ್ಯ ಸಂವಹನ ಭೇದಿಸುವ

ಹಾಗೂ ಈ ಕುರಿತಂತೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ವಿವಿಧ ಕ್ಷೇತ್ರದ ಪಾಲುದಾರರೊಂದಿಗೆ ಸಮಿತಿಯೊಂದನ್ನು ರಚಿಸುವಂತೆ ಸಚಿವರು, ಗೃಹ ಸಚಿವಾಲಯಕ್ಕೆ ಸೂಚನೆ ನೀಡಿದರು.

**********

೧೯೯೯ರ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಭಾರತೀಯ ಸೈನಿಕರ ಶೌರ್ಯವನ್ನು ಗೌರವಿಸಲು ಇಂದು ದೇಶಾದ್ಯಂತ ಕಾರ್ಗಿಲ್ ವಿಜಯ್ ದಿವಸ್ ಆಚರಿಸಲಾಗುತ್ತಿದೆ. ಯುದ್ಧದಲ್ಲಿ, ಪಾಕಿಸ್ತಾನದ ವಿರುದ್ಧ ಭಾರತ ಸಾಧಿಸಿದ ವಿಜಯ ಮತ್ತು ಆಪರೇಷನ್ ವಿಜಯ್‌ನ ಯಶಸ್ಸಿನ ೨೬ನೇ ವಾರ್ಷಿಕೋತ್ಸವವನ್ನು ಇಂದು ಆಚರಿಸಲಾಗುತ್ತಿದೆ. ಸೇನಾ ಕಾರ್ಯಾಚರಣೆ ಸಮಯದಲ್ಲಿ, ಭಾರತೀಯ ಸಶಸ್ತ್ರ ಪಡೆಗಳು ತೀವ್ರ ಹವಾಮಾನ ಪರಿಸ್ಥಿತಿ ನಡುವೆ ಜಮ್ಮು ಮತ್ತು ಕಾಶ್ಮೀರದ ಕಠಿಣ ಭೂ ಪ್ರದೇಶ ಹೊಂದಿರುವ ಕಾರ್ಗಿಲ್ ಜಿಲ್ಲೆಯಲ್ಲಿ ಪಾಕಿಸ್ತಾನಿ ಸೈನಿಕರು ಮತ್ತು ಉಗ್ರಗಾಮಿಗಳು ನುಸುಳಿದ್ದ ಪ್ರದೇಶಗಳನ್ನು ಮರಳಿ ಪಡೆದುಕೊಂಡವು.

**********

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೪ನೇ ಆವೃತ್ತಿಯಾಗಿದೆ.

**********

ಅಟಲ್ ಪಿಂಚಣಿ ಯೋಜನೆ, ಪ್ರಸ್ತುತ ಹಣಕಾಸು ವರ್ಷದಲ್ಲಿ ಒಟ್ಟು ೮ ಕೋಟಿ ದಾಖಲಾತಿಗಳನ್ನು ಮೀರುವ ಮೂಲಕ ಮಹತ್ವದ ಮೈಲಿಗಲ್ಲು ಸಾಧಿಸಿದೆ. ಯೋಜನೆಯಡಿ, ೩೯ ಲಕ್ಷ ಹೊಸ ಚಂದಾದಾರರನ್ನು ಸೇರಿಸಿಕೊಳ್ಳಲಾಗಿದೆ. ಇದು ಭಾರತ ಸರ್ಕಾರದ ಪ್ರಮುಖ ಸಾಮಾಜಿಕ ಭದ್ರತಾ ಯೋಜನೆಯಾಗಿದ್ದು, ಇದನ್ನು ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ನಿರ್ವಹಿಸುತ್ತದೆ. ೨೦೧೫ರ ಮೇ ೯ ರಂದು ಪ್ರಾರಂಭವಾದ ಈ ಯೋಜನೆ, ತನ್ನ ೧೦ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿರುವ ಸಮಯದಲ್ಲಿ ಈ ಸಾಧನೆ ಸಾಧ್ಯವಾಗಿದೆ.

**********

ಜಾರ್ಜಿಯಾದ ಬಟುಮಿಯಲ್ಲಿ ನಡೆಯುತ್ತಿರುವ ಫಿಡೆ ಮಹಿಳಾ ಚೆಸ್ ವಿಶ್ವಕಪ್‌ನ ಅಂತಿಮ ಸ್ಪರ್ಧೆ ಇಬ್ಬರು ಭಾರತೀಯರ ನಡುವಿನ ಸೆಣಸಾಟಕ್ಕೆ ಸಾಕ್ಷಿಯಾಗಲಿದೆ. ಸೆಮಿಫೈನಲ್ ಪಂದ್ಯಗಳಲ್ಲಿ ಜಯ ಸಾಧಿಸಿದ ನಂತರ, ಭಾರತದ ದಿವ್ಯಾ ದೇಶ್ಮುಖ್ ಮತ್ತು ಕೊನೇರು ಹಂಪಿ ಇಂದು ಆರಂಭವಾಗಲಿರುವ ಫೈನಲ್‌ನಲ್ಲಿ ಮುಖಾಮುಖಿಯಾಗಲಿದ್ದಾರೆ.ಇಂದು ಭಾರತೀಯ ಕಾಲಮಾನ ಸಂಜೆ ೪.೩೦ಕ್ಕೆ ಮೊದಲನೇ ಸುತ್ತಿನ ಪಂದ್ಯ ನಡೆಯಲಿದ್ದು, ನಾಳೆ ಎರಡನೇ ಸುತ್ತಿನ ಪಂದ್ಯ ಜರುಗಲಿದೆ. ಉಭಯ ಆಟಗಾರರು ಸಮಬಲ ಸಾಧಿಸಿದಲ್ಲಿ ನಾಡಿದ್ದು ಟೈ ಬ್ರೇಕರ್ ಪಂದ್ಯ ನಡೆಯಲಿದೆ. ಸೆಮಿಫೈನಲ್‌ನಲ್ಲಿ, ದಿವ್ಯಾ ದೇಶ್ಮುಖ್ ಅವರು ಚೀನಾದ ಗ್ರ್ಯಾಂಡ್‌ಮಾಸ್ಟರ್ ಟಾನ್ ಝೋಂಗ್ಯಿ ಅವರನ್ನು ಸೋಲಿಸಿದರು. ಇನ್ನೊಂದೆಡೆ, ಹಿರಿಯ ಆಟಗಾರ್ತಿ ಕೊನೇರು ಹಂಪಿ ಚೀನಾದ ಗ್ರ್ಯಾಂಡ್‌ಮಾಸ್ಟರ್ ಲೇ ಟಿಂಗ್‌ಜಿಯೆ ಅವರನ್ನು ಪರಾಭವಗೊಳಿಸಿದರು.ಈಗಾಗಲೇ, ಹಂಪಿ ಅವರು ಫಿಡೆ ವರ್ಲ್ಡ್ ಕಪ್ ಸೆಮಿಫೈನಲ್‌ಗೆ ಪ್ರವೇಶಿಸಿದ ಮೊದಲ ಭಾರತೀಯ ಮಹಿಳೆಯೆಂಬ ದಾಖಲೆ ನಿರ್ಮಿಸಿದ್ದರು. ಇನ್ನು ದಿವ್ಯಾ ದೇಶ್ಮುಖ್ ಸಹ ಮತ್ತೊರ್ವ ಭಾರತೀಯ ಆಟಗಾರ್ತಿ ಹರಿಕಾ ದ್ರೋಣವಲ್ಲಿಯನ್ನು ರ್‍ಯಾಪಿಡ್ ಟೈಬ್ರೇಕ್ ಪಂದ್ಯದಲ್ಲಿ ೨-೦ ಅಂತರದಿಂದ ಸೋಲಿಸಿ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದ್ದರು. ಭಾರತೀಯರ ನಡುವಿನ ಈ ಫೈನಲ್ ಪಂದ್ಯ ಭಾರತದ ಚೆಸ್ ಇತಿಹಾಸದಲ್ಲಿ ನೂತನ ಮೈಲಿಗಲ್ಲಾಗಿದ್ದು, ಜಾಗತಿಕ ಮಟ್ಟದಲ್ಲಿ ಭಾರತದ ಚೆಸ್ ಪ್ರಾಬಲ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

**********

ಚೀನಾದ ಚಾಂಗ್‌ಝೌನಲ್ಲಿ ನಡೆಯುತ್ತಿರುವ ಚೀನಾ ಮುಕ್ತ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಪುರುಷರ ಡಬಲ್ಸ್ ವಿಭಾಗದ ಸೆಮಿಫೈನಲ್ ಹಂತಕ್ಕೇರಿದೆ. ಇಂದು ನಡೆಯಲಿರುವ ಸೆಮಿಫೈನಲ್‌ನಲ್ಲಿ ಭಾರತದ ಜೋಡಿ ವಿಶ್ವ ಎರಡನೇ ಶ್ರೇಯಾಂಕಿತ ಮಲೇಷ್ಯಾದ ಆರೋನ್ ಚಿಯಾ ಮತ್ತು ಸೋವುಯಿ ಇಕ್ ಜೋಡಿಯನ್ನು ಎದುರಿಸಲಿದೆ. ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಜೋಡಿ ವಿಶ್ವ ಮೂರನೇ ಶ್ರೇಯಾಂಕಿತ ಮಲೇಷ್ಯಾದ ಆಂಗ್ ಯುವ್ ಸಿನ್ ಮತ್ತು ತಿಯೊ ಎಇ ಜೋಡಿಯನ್ನು ೨೧-೧೮, ೨೧-೧೪ ನೇರ ಸೆಟ್‌ಗಳಿಂದ ಮಣಿಸಿತು.